# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 54(104)
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್. ಎಸ್
3. ಉತ್ತರಿಸುವ ದಿನಾಂಕ : 08-12-2025
4. ಉತ್ತರಿಸುವ ಸಚಿವರು : ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಸರ್ಕಾರದ ಜಿಲ್ಲಾ ವೈದ್ಯಕೀಯ ಶಿಕ್ಷಣ ಕಾಲೇಜುಗಳು ಯಾವ ಯಾವ ಜಿಲ್ಲೆಗಳಲ್ಲಿವೆ: (ವಿವರ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಬಳ್ಳಾರಿ, ಬೀದರ್, ರಾಯಚೂರು, ಬೆಳಗಾವಿ, ಶಿವಮೊಗ್ಗ, ಹಾಸನ, ಮಂಡ್ಯ, ಚಾಮರಾಜನಗರ, ಕೊಡಗು, ಕಲಬುರಗಿ, ಕೊಪ್ಪಳ, ಗದಗ, ಕಾರವಾರ, ಚಿಕ್ಕಬಳ್ಳಾಪುರ, ಹಾವೇರಿ, ಯಾದಗಿರಿ, ಚಿಕ್ಕಮಗಳೂರು ಚಿತ್ರದುರ್ಗ, ಜಿಲ್ಲೆಗಳಲ್ಲಿ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಯಾವ ಯಾವ ಜಿಲ್ಲೆಗಳಿಗೆ ಹೊಸದಾಗಿ ವೈದ್ಯಕೀಯ ಶಿಕ್ಷಣ ಕಾಲೇಜುಗಳನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಂಡಿದೆ: (ವಿವರ ನೀಡುವುದು) | ರಾಮನಗರ, ಕನಕಪುರ ಮತ್ತು ಬಾಗಲಕೋಟೆಯಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುದಾನದಿಂದ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.<br><br>ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರದಿಂದ ಪೂರ್ವಭಾವಿ ಸಭೆ ನಡೆಸಲಾಗಿದ್ದು, iDECK ಸಂಸ್ಥೆಯನ್ನು Transaction Advisor ಆಗಿ ನೇಮಿಸಲಾಗಿದೆ. |
| ಇ) | ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳ ಬಹುದಿನಗಳ ಬೇಡಿಕೆ ಇದ್ದು, ಸದರಿ ಬೇಡಿಕೆಗೆ ಅನಿರ್ದಿಷ್ಟಾವಧಿ ಧರಣಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದರೆ, ವೈದ್ಯಕೀಯ ಶಿಕ್ಷಣ ಕಾಲೇಜುಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?<br>(ಸಂಪೂರ್ಣ ವಿವರ ನೀಡುವುದು) | ಬಂದಿದೆ.<br><br>ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.<br><br>ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00ಕೋಟಿಗಳ ಅನಾವರ್ತಕ ವೆಚ್ಚ ಹಾಗೂ 60.00ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ. ಅದರಂತೆ, ಅನುದಾನದ |

| | | |
|---|---|---|
| | | ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಂದಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು.<br><br>ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಪೂರ್ವಭಾವಿ ಸಭೆಯನ್ನು ನಡೆಸಲಾಗಿದೆ.<br><br>ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವಂತೆ ಧರಣಿಗಳು ನಡೆಯುತ್ತಿದ್ದು, ಕಾಲೇಜು ಪ್ರಾರಂಭದ ಕುರಿತು ಮಾನ್ಯ ಜಿಲ್ಲಾಉಸ್ತುವಾರಿ ಸಚಿವರು, ಮಾನ್ಯ ಶಾಸಕರುಗಳು, ಗಣ್ಯರು ಹಾಗೂ ಜಿಲ್ಲಾ ಮುಖಂಡರೊಂದಿಗೆ ಸಭೆಯನ್ನು ನಡೆಸಿ, ಈ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ:** ಎಂಇಡಿ 588 ಎಂಎಂಸಿ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.